PRAJAVANI 03/11/19

## ಭಾರತೀಯ ಮಕ್ಕಳ ಚಲನ ಚಿತ್ರೋತ್ಸವ ಸಂಘದ ಸಭೆ

# ಚಿತ್ರೋತ್ಸವ ವ್ಯವಸ್ಥಿತ ಆಯೋಜನೆಗೆ ಎಡಿಸಿ ಸೂಚನೆ

ಪ್ರಜಾವಾಣಿ ವಾರ್ತೆ

ಕೊಪ್ಪಳ: ನವೆಂಬರ್ ಎರಡನೇ ವಾರದಿಂದ ಭಾರತೀಯ ಮಕ್ಕಳ ಚಲನಚಿತ್ರ ಸೊಸೈಟಿಯಿಂದ ನಡೆಯುವ ಮಕ್ಕಳ ಚಲನಚಿತ್ರೋತ್ಸವವನ್ನು ವ್ಯವಸ್ಥಿತವಾಗಿ ಆಯೋಜಿಸಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಎಂ.ಪಿ. ಮಾರುತಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ನಡೆದ 'ಭಾರತೀಯ ಮಕ್ಕಳ ಚಲನ ಚಿತ್ರೋತ್ಸವ ಸೊಸೈಟಿ ಹಾಗೂ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ ನಡೆಯುವ ಮಕ್ಕಳ ಚಲನಚಿತ್ರೋತ್ಸವ ಕಾರ್ಯಕ್ರಮ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತೀಯ ಮಕ್ಕಳ ಚಲನಚಿತ್ರ ಸೊಸೈಟಿಯು ಮಕ್ಕಳಲ್ಲಿ ಸಾಮಾಜಿಕ ಪ್ರಜ್ಞೆ, ಜವಾಬ್ದಾರಿ ಮೂಡಿಸುವ ಸಂದೇಶವುಳ್ಳ ಚಿತ್ರಗಳಾದ ಅಲೆಗಳು ಹಾಗೂ ಪುಟಾಣಿ ಪ್ರಪಂಚ ಚಲನಚಿತ್ರಗಳನ್ನು ಜಿಲ್ಲೆಯ ವಿವಿಧ ಚಿತ್ರಮಂದಿರಗಳಲ್ಲಿ ಪ್ರದರ್ಶಿಸುತ್ತಿದೆ. ಶಿಕ್ಷಣ ಇಲಾಖೆಯ ಸಹಭಾಗಿತ್ವದಲ್ಲಿ ಚಲನಚಿತ್ರೋತ್ಸವ ನಡೆಯುತ್ತಿರುವುದರಿಂದ ಆಯಾ ಚಿತ್ರಮಂದಿರಗಳ ಹತ್ತಿರದ ಶಾಲೆಗಳಿಂದ ಮಕ್ಕಳನ್ನು ಆಯ್ಕೆ ಮಾಡಿ, ಮಕ್ಕಳ ಸುರಕ್ಷತೆಗಾಗಿ ಅಗತ್ಯ ಪ್ರಮಾಣದ ಶಿಕ್ಷಕರನ್ನು ನಿಯೋಜಿಸಬೇಕು. ಚಲನಚಿತ್ರೋತ್ಸವ ಆಯೋಜಕರಿಗೆ ಸ್ಥಳೀಯವಾಗಿ ಹೆಚ್ಚಿನ ಪರಿಚಯವಿರದ ಕಾರಣ ಆಯೋಜಕರೊಂದಿಗೆ ಶಿಕ್ಷಣ ಇಲಾಖೆಯ ಸಿಬ್ಬಂದಿ ನಿರಂತರವಾಗಿ ಅವರೊಂದಿಗೆ ಸಂಪರ್ಕದಲ್ಲಿದ್ದು, ಚಲನಚಿತ್ರೋತ್ಸವಕ್ಕೆ ಯಾವುದೇ ತೊಂದರೆಯಾಗದಂತೆ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಕೊಪ್ಪಳದಲ್ಲಿ ಶಿವ ಹಾಗೂ ಶ್ರೀ ಲಕ್ಷ್ಮಿ ಚಿತ್ರಮಂದಿರಗಳಲ್ಲಿ, ಯಲಬುರ್ಗಾದಲ್ಲಿ ಮಂಜುನಾಥ, ಪ್ರವೀಣ ಹಾಗೂ ಶಕ್ತಿ ಚಿತ್ರಮಂದಿರಗಳಲ್ಲಿ, ಗಂಗಾವತಿಯಲ್ಲಿ ಕನಕದುರ್ಗಾ ಹಾಗೂ ಶಿವೆ ಚಿತ್ರಮಂದಿರಗಳಲ್ಲಿ



ಕೊಪ್ಪಳದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ನಡೆದ ಭಾರತೀಯ ಮಕ್ಕಳ ಚಲನಚಿತ್ರೋತ್ಸವ ಕಾರ್ಯಕ್ರಮ ಕುರಿತ ಪೂರ್ವಭಾವಿ ಸಭೆಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಎಂ.ಪಿ.ಮಾರುತಿ ಮಾತನಾಡಿದರು

ಅವರ ದೈನಂದಿನ ಪ್ರದರ್ಶನಗಳಿಗೆ ತೊಂದರೆಯಾಗದಂತೆ ಪ್ರತಿದಿನ ಬೆಳಿಗ್ಗೆ 9ರಿಂದ 10.30ರ ವರೆಗೆ ಮಕ್ಕಳ ಚಲನಚಿತ್ರಗಳು ಪ್ರದರ್ಶನವಾಗಲಿವೆ. ಪ್ರತಿ ಪ್ರದರ್ಶನಕ್ಕೂ ಚಿತ್ರಮಂದಿರಗಳಿಗೆ ಸೊಸೈಟಿಯಿಂದ ನಿಗದಿ ಪಡಿಸಿದ ₹ 2,500 ನೀಡಲಾಗುತ್ತದೆ. ಆಯ್ಕೆಯಾದ ಚಿತ್ರಮಂದಿರಗಳ ಮಾಲೀಕರು ಅಥವಾ ವ್ಯವಸ್ಥಾಪಕರು ಮಕ್ಕಳ ಚಲನಚಿತ್ರ ಪ್ರದರ್ಶನಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಭಾರತೀಯ ಮಕ್ಕಳ ಚಲನಚಿತ್ರ ಸೊಸೈಟಿಯ ಅಧಿಕಾರಿ ವಿ.ಎಸ್.ಅಗಿಲಾ, ಶಿಕ್ಷಣ ಇಲಾಖೆಯ ಅಧಿಕಾರಿ ಕಂಬಳಿ, ತಹಶೀಲ್ದಾರ್ ಜೆ.ಬಿ.ಮಜ್ಗಿ, ಡಿವೈಎಸ್‌ಪಿ ವೆಂಕಟಪ್ಪ ನಾಯಕ ಇದ್ದರು.

Scanned by CamScanner